



ಅರುಣ ಪಿ. ಭಟ್ಟ


## ವಾರಭವಿಷ್ಯ: 8.4.2021ರಿಂದ 14.4.2021ರವರೆಗೆ




ಹೊಸ ಕೆಲಸಗಳಿಗೆ ಪ್ರಯತ್ನಿಸಲು ಸೂಕ್ತ ಕಾಲ. ಉದ್ಯೋಗದಲ್ಲಿ ಅದ್ಭುತ ಯಶಸ್ಸು. ಕಲೆ, ಬರವಣಿಗೆ, ವೈದ್ಯಕೀಯ, ನಿರ್ಮಾಣ, ಭದ್ರತೆ ಮತ್ತು ತಂತ್ರಜ್ಞಾನದಂಥ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಗ್ರಹಗತಿಗಳು ಅನುಕೂಲಕರವಾಗಿವೆ. ಹೊಸದಾಗಿ ಕೆಲಸಕ್ಕಾಗಿ ಇಂಟರ್ ವ್ಯೂಗಳಿಗೆ ತೆರಳಿದರೆ ಸಕಾರಾತ್ಮಕ ಫಲಿತಾಂಶ ದೊರೆಯುವ ಸಾಧ್ಯತೆ ಇದೆ. ಶುಭದಿನ **9**. ಗೋಪೂಜೆ ಮಾಡಿರಿ. ಉಮಾಮಹೇಶ್ವರ ಪ್ರಾರ್ಥನೆ ಮಾಡಿರಿ.




ಆದಾಯ ಹೆಚ್ಚಳಕ್ಕೆ ಅವಕಾಶ ಇದೆ. ವಾರದ ಆರಂಭದಲ್ಲಿ ಮನೆಯಲ್ಲಿ ಸಂತೋಷವಾಗಿ ಇರುವುದರಿಂದ ನಿಮ್ಮ ಮನಸು ಕೂಡ ಸಮಾಧಾನವಾಗಿ ಇರುತ್ತದೆ. ಹಲವು ಕ್ಷೇತ್ರದಲ್ಲಿ ನೀವು ಈ ಹಿಂದೆ ಪಟ್ಟ ಶ್ರಮಕ್ಕೆ ಈಗ ಫಲಿತಾಂಶ ದೊರೆಯುತ್ತದೆ. ನಿಮ್ಮ ಜೀವನಮಟ್ಟ ಹೆಚ್ಚುತ್ತದೆ. ಉದ್ಯೋಗ ವಿಚಾರದಲ್ಲಿ ಯಶಸ್ಸು ನಿಮ್ಮಮನೆಯ ಬಾಗಿಲು ಬಡಿಯುತ್ತದೆ. ಶುಭದಿನ **12**. ಹನುಮಾನ್ ಚಾಲಿಸ್ ಪಠಿಸಿರಿ.





ಶುಭ ಕಾರ್ಯವನ್ನು ಆಯೋಜಿಸುವ ಸಾಧ್ಯತೆ ಇದೆ. ಈ ವಾರದ ಮೊದಲಾರ್ಧದಲ್ಲಿ ಗ್ರಹಗತಿಗಳು ನಿಮಗೆ ಅನುಕೂಲಕರವಾಗಿವೆ. ಈ ಅವಧಿಯಲ್ಲಿ ಅತಿ ಮುಖ್ಯವಾದ ಕೆಲಸಗಳನ್ನು ಮಾಡಿಕೊಂಡು ಬಿಡಿ. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ, ವರ್ಚಸ್ಸು ಹೆಚ್ಚುವ ಸಾಧ್ಯತೆ ಇದೆ. ಕೌಟುಂಬಿಕವಾಗಿ ಬಹಳ ನೆಮ್ಮದಿಯಾಗಿ ಇರುತ್ತೀರಿ. ಶುಭದಿನ **14**. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.





ಈ ವಾರ ಸಕಾರಾತ್ಮಕ ಪ್ರಭಾವದಿಂದ ನೀವು ಎದುರಿಸುತ್ತಿರುವ ಹಲವು ಬಿಕ್ಕಟ್ಟುಗಳು ನಿವಾರಣೆ ಆಗುತ್ತವೆ. ಕುಟುಂಬದಲ್ಲಿ ಸಮತೋಲನ ಕಾಯ್ದುಕೊಳ್ಳಲು ಪ್ರಯತ್ನ ಮಾಡುತ್ತೀರಿ. ಹೂಡಿಕೆ, ವಿದೇಶಿ ವ್ಯವಹಾರದಲ್ಲಿ ನೀವಂದುಕೊಂಡಂಥ ಫಲಿತಾಂಶ ದೊರೆಯಲಿದೆ. ಆರ್ಥಿಕ ಸ್ಥಿತಿ ಸಾಧಾರಣ ಎಂಬುದಕ್ಕಿಂತ ಸ್ವಲ್ಪ ಉತ್ತಮವಾಗಿರುತ್ತದೆ. ಆದರೂ ಏರಿಳಿತಗಳಿರುತ್ತವೆ. ಶುಭದಿನ **11**. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಆರೋಗ್ಯ ಸಮಸ್ಯೆ ಬಗೆಹರಿಯಲು ಸಾಧ್ಯವಾಗುತ್ತದೆ. ಇದರಿಂದ ನಿಮ್ಮ ಸಾಮರ್ಥ್ಯ ಹೆಚ್ಚಾಗುತ್ತದೆ. ಮನೆಯಲ್ಲಿ ಶುಭ ಕಾರ್ಯ ಆಯೋಜಿಸುವ ಸಾಧ್ಯತೆ ಇದೆ. ನಿಮಗೆ ವಹಿಸಿದ ಜವಾಬ್ದಾರಿಗಳನ್ನು ಸಹ ತುಂಬ ಸಲೀಸಾಗಿ, ಅಚ್ಚುಕಟ್ಟಾಗಿ ಪೂರ್ಣಗೊಳಿಸುತ್ತೀರಿ. ಪ್ರೀತಿಪಾತ್ರರ ಜತೆಗೆ ತುಂಬ ಸಂತೋಷವಾದ ಸಮಯವನ್ನು ಕಳೆಯಲಿದ್ದೀರಿ. ಶುಭದಿನ **10**. ವಿಷ್ಣು ಸಹಸ್ರನಾಮ ಓದಿರಿ.





ವಾರದ ಶುರುವಿನಲ್ಲೇ ಉದ್ಯೋಗ ವಿಚಾರವಾಗಿ ಪ್ರಯಾಣ ಮಾಡಬೇಕಾಗಿ ಬರಬಹುದು. ವರ್ಗಾವಣೆಯ ಸಾಧ್ಯತೆ ಇದೆ. ವ್ಯವಹಾರ ವಿಸ್ತರಣೆಗೆ ಆಲೋಚನೆ ಮಾಡುತ್ತೀರಿ. ಆದರೆ ಅದರ ಸಲುವಾಗಿಯೂ ಪ್ರಯಾಣ ಮಾಡುವ ಅಗತ್ಯ ಕಂಡುಬರುತ್ತದೆ. ಹಣಕಾಸು ಹೂಡಿಕೆ, ವಿದೇಶ ವ್ಯವಹಾರ, ದಾಖಲೆ ಪತ್ರಗಳಿಗೆ ಸಂಬಂಧಿಸಿದಂತೆ ನಿಮಗೆ ಅನುಕೂಲ ಆಗಲಿದೆ. ಶುಭದಿನ **9**. ನವದುರ್ಗಾ ಆರಾಧನೆ ಮಾಡಿರಿ.




ಈ ವಾರ ಹಲವು ಕ್ಷೇತ್ರದಲ್ಲಿ ಸಕಾರಾತ್ಮಕ ಫಲಿತಾಂಶ ಪಡೆಯಲು ಸೂಕ್ತವಾಗಿದೆ. ರಚನಾತ್ಮಕ ಕಲೆ, ಸಾಹಿತ್ಯ, ಶಿಕ್ಷಣ, ಉಪನ್ಯಾಸ, ಸಂಶೋಧನೆ, ತಂತ್ರಜ್ಞಾನ ಕ್ಷೇತ್ರದಲ್ಲಿ ಆಸಕ್ತಿ ಇದ್ದವರಿಗೆ ಅದೃಷ್ಟ ಹುಡುಕಿಕೊಂಡು ಬರಲಿದೆ. ನಿಮ್ಮ ಶ್ರಮಕ್ಕೆ ಉತ್ತಮ ಫಲಿತಾಂಶ ಸಿಗಲಿದೆ. ಆರೋಗ್ಯದಲ್ಲಿ ಚೇತರಿಕೆ, ವೈಯಕ್ತಿಕ ಸಂಬಂಧದಲ್ಲಿ ಸಂತೋಷ ಕಾಣಿಸಿಕೊಳ್ಳುತ್ತದೆ. ಶುಭದಿನ **11**. ಆದಿತ್ಯ ಹೃದಯ ಪಠಿಸಿರಿ.





ವಾರದ ಮೊದಲ ಭಾಗದಲ್ಲಿ ಅತಿ ಮುಖ್ಯವಾದ ಕೆಲಸ, ಭೇಟಿ, ವೈಯಕ್ತಿಕ ಕೆಲಸಗಳನ್ನು ಮುಗಿಸಿಕೊಳ್ಳಿ. ಉದ್ಯೋಗಸ್ಥರಲ್ಲಿ ಗುಣಮಟ್ಟದ ನಿರ್ಧಾರ ಹಾಗೂ ಆಲೋಚನೆಗಳಿಂದ ಮೆಚ್ಚುಗೆಗೆ ಪಾತ್ರರಾಗುತ್ತೀರಿ. ನಿಮ್ಮ ಸಾಮರ್ಥ್ಯ ಕಂಡು ಇತರರು ಬೆರಗಾಗುತ್ತಾರೆ. ಬಹುಮಾನ ಅಥವಾ ಸಾರ್ವಜನಿಕ ಮನ್ನಣೆ ದೊರೆಯುವ ಅವಕಾಶಗಳು ನಿಚ್ಚಳವಾಗಿವೆ. ಶುಭದಿನ **10**. ಲಕ್ಷ್ಮೀ ನರಸಿಂಹ ಸ್ತೋತ್ರ ಪಠಿಸಿರಿ.





ಗ್ರಹಗತಿಗಳು ನಿಮ್ಮ ಕಡೆಗೆ ಶುಭ ದೃಷ್ಟಿ ಬೀರುತ್ತಿವೆ. ಬಾಕಿ ಇರುವ ಕೆಲಸಗಳಿಗೆ ಈ ವಾರ ಪರಿಹಾರ ಸಿಗಲಿದೆ. ಉದ್ಯೋಗ ಹಾಗೂ ವೈಯಕ್ತಿಕ ಸಂಗತಿಗಳಲ್ಲಿ ನಿಮ್ಮ ಪಾಲಿಗೆ ಯಶಸ್ಸು ದೊರೆಯಲಿದೆ. ತುಂಬ ಮುಖ್ಯವಾದ ಚರ್ಚೆ ಕೂಡ ನಡೆಸುವ ಸಾಧ್ಯತೆ ಇದೆ. ಈ ಅವಧಿಯಲ್ಲಿ ಹೆಚ್ಚು ಸಮಾಧಾನ ಹಾಗೂ ಸಂತೋಷದಿಂದ ಕಾಣಿಸಿಕೊಳ್ಳುತ್ತೀರಿ. ಶುಭದಿನ **9**. ಸುಬ್ರಹ್ಮಣ್ಯ ಸ್ವಾಮಿಗೆ ಕ್ಷೀರಾಭಿಷೇಕ ಮಾಡಿರಿ.




ವಾರದ ಶುರುವಿನಲ್ಲಿ ದೂರದ ಪ್ರದೇಶಗಳಿಗೆ ಪ್ರಯಾಣ ಮಾಡುವ ಸಾಧ್ಯತೆ ಇದೆ. ಹಣಕಾಸು ಹೂಡಿಕೆಗೆ ಅನುಕೂಲಕರವಾಗಿ ಇವೆ. ದೂರದ ಪ್ರದೇಶಗಳಲ್ಲಿ ವ್ಯಾಪಾರ ವ್ಯವಹಾರ ವಿಸ್ತರಣೆ ಮಾಡಬೇಕು ಅಂದುಕೊಳ್ಳುತ್ತಿರುವವರಿಗೆ ಹಲವು ಅವಕಾಶಗಳು ದೊರೆಯಲಿವೆ. ಆದರೆ ಈ ವೇಳೆ ನಿಮ್ಮ ಆರೋಗ್ಯದಲ್ಲಿ ಕೆಲ ಸಮಸ್ಯೆಗಳು ಕಾಣಿಸಿಕೊಳ್ಳುವ ಸಾಧ್ಯತೆಗಳಿವೆ. ಶುಭದಿನ **12**. ಕಾಲಭೈರವನ ಸೇವೆ ಮಾಡಿರಿ.




ವಾರದ ಶುರುವಿನಿಂದಲೇ ನಿಮ್ಮ ಆರೋಗ್ಯ ಉತ್ತಮವಾಗಿರುತ್ತದೆ. ಆ ಕಾರಣಕ್ಕೆ ನೀವೂ ಸಂತೋಷವಾಗಿರುತ್ತೀರಿ. ಸದ್ಯಕ್ಕೆ ನೀವು ಎದುರಿಸುತ್ತಿರುವ ಬಿಕ್ಕಟ್ಟುಗಳು ನಿವಾರಣೆ ಆಗುತ್ತವೆ. ನಿಮ್ಮ ಸಾಮರ್ಥ್ಯ ಹಾಗೂ ಒಟ್ಟಾರೆ ಆಲೋಚನೆಯಲ್ಲಿ ಸಕಾರಾತ್ಮಕವಾದ ಪ್ರಗತಿ ಕಾಣಿಸಿಕೊಳ್ಳುತ್ತದೆ. ದೈಹಿಕ ಸದೃಢತೆ ಬಗ್ಗೆ ಹೆಚ್ಚಿನ ಗಮನ ನೀಡುವ ಸಾಧ್ಯತೆ ಇದೆ. ಶುಭದಿನ **14**. ಶನಿಸ್ತೋತ್ರ ಪಠಿಸಿರಿ.




ಕುಟುಂಬದವರಿಂದ ಹಾಗೂ ಸಂಬಂಧಿಕರಿಂದ ಶುಭ ಸುದ್ದಿಯನ್ನು ಕೇಳುತ್ತೀರಿ. ಈ ವರೆಗಿನ ಬಿಕ್ಕಟ್ಟು ಸಮಸ್ಯೆಗಳು ಶಮನವಾಗುತ್ತವೆ. ಅಥವಾ ಕನಿಷ್ಠ ಪಕ್ಷ ಪರಿಸ್ಥಿತಿಯಲ್ಲಿ ಸುಧಾರಣೆ ಕಾಣಿಸುತ್ತದೆ. ನಿಮ್ಮ ಸಾಮರ್ಥ್ಯ, ಚೈತನ್ಯ ವೃದ್ಧಿಯಾಗುತ್ತದೆ. ಇದರ ಜತೆಗೆ ಧೈರ್ಯ, ಮಾನಸಿಕ ದೃಢತೆ ಹೆಚ್ಚಲಿದೆ. ನಿಮ್ಮ ವಿರೋಧಿಗಳನ್ನು ಈ ಅವಧಿಯಲ್ಲಿ ಮಣಿಸುತ್ತೀರಿ. ಶುಭದಿನ 10. ಗಣಪತಿಗೆ ದೂರ್ವಾರ್ಚನೆ ಮಾಡಿರಿ.